ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-EXAM0ECS1/71/2025

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು –560001
ದೂರವಾಣಿ ಸಂಖ್ಯೆ:080–2220777
ದಿನಾಂಕ:26.06.2025

## ಸುತ್ತೋಲೆ

ವಿಷಯ: ಏಪ್ರಿಲ್/ಮೇ 2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಥಿಯರಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡುವುದು/ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಿಸಿರುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: DTE-EXAM0ECS1/71/2025 ದಿ: 06.06.2025

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಏಪ್ರಿಲ್/ಮೇ 2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಥಿಯರಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡಲು ಮತ್ತು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕ:13.06.2025 ರಂದು ಕೊನೆಯ ದಿನ ನಿಗದಿ ಮಾಡಲಾಗಿತ್ತು.

ಮುಂದುವರೆದು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಉತ್ತರ ಪತ್ರಿಕೆಯ ಫೋಟೋ ಪ್ರತಿ/ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಅವಧಿಯನ್ನು **ದಿನಾಂಕ: 28.06.2025 ರವರೆಗೆ ವಿಸ್ತರಿಸಲಾಗಿದೆ.** ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತಪ್ಪದೇ ತರುವಂತೆ ಸಂಸ್ಥೆಯ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಸಂಸ್ಥೆಗಳಲ್ಲಿ ಆನ್‌ಲೈನ್ ಮೂಲಕ ಭರ್ತಿ ಮಾಡಲ್ಪಟ್ಟ ಫೋಟೋ ಪ್ರತಿಯ ಅರ್ಜಿಯನ್ನು/ಮರು ಮೌಲ್ಯಮಾಪನದ ಅರ್ಜಿಗಳನ್ನು **ದಿನಾಂಕ:30.06.2025 ಸಂಜೆ 5.30** ಗಂಟೆಯೊಳಗೆ ಈ ಕಛೇರಿಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆಯ ಮುಖಾಂತರ ಸಲ್ಲಿಸಲು ತಿಳಿಸಲಾಗಿದೆ. ನಂತರ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸಂಸ್ಥೆಯ ಪ್ರಾಚಾರ್ಯರುಗಳು ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

**ಇವರಿಗೆ,**

ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ವಿದ್ಯಾರ್ಥಿ ಸೂಚನಾಫಲಕದಲ್ಲಿ ಪ್ರಕಟಿಸಲು & ತರಗತಿಗಳಲ್ಲಿ ಸುತ್ತೋಲಿಸಲು

ಪ್ರತಿ:

1) ಶ್ರೀ ಹರೀಶ ಶೆಟ್ಟಿ, ಪ್ರಾಚಾರ್ಯರು, ಕರ್ನಾಟಕ (ಸ) ಪಾಲಿಟೆಕ್ನಿಕ್, ಮಂಗಳೂರು –ಅಗತ್ಯ ಕ್ರಮಕ್ಕಾಗಿ
2) ಇ– ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಗಣಕ ಕೇಂದ್ರ – ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
4) ಕಾರ್ಯದರ್ಶಿಯವರು ಆಪ್ತ ಶಾಖೆ